ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಭೂ ಪರಿವರ್ತನೆ ಕೋರಿ ಬಂದಿರುವ ಅರ್ಜಿಗಳ ಬಗ್ಗೆ

ಶ್ರೀ ಎಂ.ಎ. ಗೋಪಾಲಸ್ವಾಮಿ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ):-

178 (19) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಹಾಸನ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ಭೂ ಪರಿವರ್ತನೆಗಾಗಿ ಎಷ್ಟು ಅರ್ಜಿಗಳು ಸ್ವೀಕೃತವಾಗಿದೆ; ಯಾವ ಯಾವ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಕೋರಿ ಅರ್ಜಿಗಳನ್ನು ಸಲ್ಲಿಸಿರುತ್ತಾರೆ ; ಇವುಗಳಲ್ಲಿ ವಿಲೇವಾರಿಯಾದ ಅರ್ಜಿಗಳೆಷ್ಟು; ಹಾಗೂ ವಿಲೇವಾರಿಯಾಗದೇ ಬಾಕಿ ಇರುವ ಅರ್ಜಿಗಳೆಷ್ಟು; (ಪ್ರಕರಣವಾರು ವಿವರ ಒದಗಿಸುವುದು)

(ಆ) ಹಾಸನ ಜಿಲ್ಲೆಯಲ್ಲಿ ಕಳೆದ 3 ವರ್ಷಗಳಲ್ಲಿ ಕೈಗಾರಿಕೆಗಳನ್ನು ಸ್ಥಾಪಿಸುವ ಉದ್ದೇಶಗಳಿಗಾಗಿ ಭೂ ಪರಿವರ್ತನೆ ಕೋರಿ ಸಲ್ಲಿಕೆಯಾದ ಅರ್ಜಿಗಳೆಷ್ಟು; ಇವುಗಳಲ್ಲಿ ವಿಲೇವಾರಿಯಾದ ಅರ್ಜಿಗಳೆಷ್ಟು; ಹಾಗೂ ವಿಲೇವಾರಿಯಾಗದೇ ಬಾಕಿ ಇರುವ ಅರ್ಜಿಗಳೆಷ್ಟು ; (ವಿವರವನ್ನು ಪ್ರಕರಣವಾರು ಒದಗಿಸುವುದು)

(ಇ) ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ನೀಡಲು ಯಾವ ಕಾಯ್ದೆಯಡಿಯಲ್ಲಿ ಅವಕಾಶ ಕಲ್ಪಿಸಲಾಗಿದೆ; (ಕಾಯ್ದೆಯ ಸಂಪೂರ್ಣ ವಿವರ ನೀಡುವುದು)

(ಈ) ಕರ್ನಾಟಕ ಭೂಕಂದಾಯ ಅದಿನಿಯಮದಡಿ ಕೆಲವು ತುರ್ತು ಸಂದರ್ಭಗಳಲ್ಲಿ ಸರ್ಕಾರಿ ಭೂಮಿಯನ್ನು ಮಂಜೂರಾತಿ ಮಾಡಲು ಜಿಲ್ಲಾಧಿಕಾರಿಯವರಿಗೆ ಅವಕಾಶ ಕಲ್ಪಿಸಲಾಗಿದೆಯೇ; (ಆದೇಶದ ಪ್ರತಿಯೊಂದಿಗೆ ವಿವರ ನೀಡುವುದು)

(ಉ) ಸರ್ಕಾರಿ ಶಾಲೆಗಳು, ಸರ್ಕಾರಿ ವಸತಿ ಶಾಲೆಗಳು ಹಾಗೂ ಇತರೆ ಸರ್ಕಾರಿ ಉದ್ದೇಶಗಳಿಗೆ ಭೂಮಿ ಮಂಜೂರಾತಿ ಮಾಡಲು ಇರುವಂತಹ ಮಾನದಂಡಗಳೇನು ? (ವಿವರ ನೀಡುವುದು)